# ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾದೀಶರ ನ್ಯಾಯಾಲಯ ಯಾದಗಿರಿ.

**ಸಿ.ಸಿ. ನಂಃ 824/2018**

ಫಿರ್ಯಾಧಿಕಾರಃ ಕರ್ನಾಟಕ ಸರ್ಕಾರದ ಪರವಾಗಿ ಅಬಕಾರಿ
ಪೊಲೀಸ್ ಇಲಾಖೆ

// ವಿರುದ್ಧ //

**1** ನೇ ಆರೋಪಿ ಃ ವೆಂಕಟೇಶ ತಂದೆ ಮರೆಪ್ಪ ಶ್ರೀಗಿರಿ,
ವಃ **35** ವರ್ಷ, ಸಾಃ ಈ/**54**, ಶಹಾಬಾದ ರೋಡ ಪ್ರಶಾಂತನಗರ(ಎ),
ರಾಜಾಪೂರ, ತಾಃ ಮತ್ತು ಜಿಃ ಯಾದಗಿರಿ.

<u>ದೋಷಾರೋಪಣೆ</u>

ನಾನು ಶ್ರೀ. ಅರುಣ ಚೌಗುಲೆ ಬಿ.ಎ.,ಎಲ್.ಎಲ್.ಬಿ.,(Honors) ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳು ಯಾದಗಿರಿ, ಈ ಕೆಳಕಂಡ ಆರೋಪಿತರು ಆದ ನಿಮ್ಮ ಮೇಲೆ ಈ ಮೂಲಕ ಕೆಳಕಂಡಂತೆ ದೋಷಾರೋಪಣೆಗೆ ಗುರಿಪಡಿಸುತ್ತೇನೆ.

ದಿನಾಂಕಃ 09.02.2018 ರಂದು ಸಂಜೆ 04.30 ಗಂಟೆ ಸುಮಾರಿಗೆ ಅಬಕಾರಿ ನೀರಿಕ್ಷಕರು ತಮ್ಮ ಸಿಬ್ಬಂದಿಗಳೊಂದಿಗೆ ಯಾದಗಿರಿ ನಗರದಿಂದ ವಾಡಿಗೆ ಹೋಗುವ ರಸ್ತೆಯಲ್ಲಿ ಗಸ್ತು ಮಾಡುತ್ತಿದ್ದಾಗ ಬಂದ ಖಚಿತ ಮಾಹಿತಿ ಮೇರೆಗೆ ಅಲ್ಲಿಪುರ ಕ್ರಾಸ್ ನಿಂದ ಯರಗೋಳದ ಕಡೆಗೆ ಹೋಗುವ ರಸ್ತೆಯಲ್ಲಿ 02 ಕಿ.ಮೀ ದೂರದಲ್ಲಿ ದಾಳಿ ಮಾಡಲಾಗಿ ಆರೋಪಿತನಾದ ನೀವು ಹೊಂಡಾಶೈನ್ ದ್ವಿಚಕ್ರ ವಾಹನ ಸಂಖ್ಯೆ ಕೆಎ-33-ಯು-9030 ನೇದ್ದರ ಮೇಲೆ 90 ಎಂ.ಎಲ್ ನ 48 ಓರಿಜಿನಲ್ ಚಾಯ್ಸ ವಿಸ್ಕಿಯ ಟೆಟ್ರಾ ಪ್ಯಾಕಗಳು, 330 ಎಂ.ಎಲ್ ನ 36 ಕಿಂಗ್ ಫಿಷರ್ ಟಿನಗಳು ಮತ್ತು 650 ಎಂ.ಎಲ್ ನ 12 ಕಿಂಗ್ ಫಿಷರ್ ಬಾಟಲಗಳನ್ನು ಮಾರಾಟದ ಉದ್ದೇಶದಿಂದ ಸಾಗಾಣಿಕೆ ಮಾಡುತ್ತಿರುವುದು ಕಂಡುಬಂದಿದ್ದು, ಆ ಮೂಲಕ 1ನೇ ಆರೋಪಿತನಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 38(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

<u>ಆರೋಪಿತನ ಹೇಳಿಕೆ</u>

ಪ್ರಶ್ನೆ-1ಃ ಮೇಲೆ ಓದಿ ಹೇಳಿದ ಆಪಾದನೆ/ದೋಷಾರೋಪಣೆ ತಿಳಿಯಿತೆ ಅಥವಾ ಅರ್ಥವಾಯಿತೇ?

ಉತ್ತರಃ ತಿಳಿಯಿತು.

ಪ್ರಶ್ನೆ-2ಃ ನೀವು ತಪ್ಪೊಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗ ಬಯಸುವಿರಾ?

ಉತ್ತರಃ ವಿಚಾರಣೆಯಾಗಬೇಕು.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ಇಂದು ದಿನಾಂಕಃ 04.12.2025 ರಂದು ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿಗೆ ಓದಿ ಹೇಳಲಾಯಿತು.)

ದಿನಾಂಕಃ 04.14.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಗಳು, ಯಾದಗಿರಿ.